## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.105/2024

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಡಾ.ತೇಜಸ್ವಿ ಬಿ. ಟಿ | CW: 9 | PW: 10 |
| ತಂದೆಯ ಹೆಸರು | : | ಬಿ. ತಿಮ್ಮಪ್ಪ | | |
| ವಯಸ್ಸು | : | 48 | | |
| ವೃತ್ತಿ | : | ವೈದ್ಯಾಧಿಕಾರಿಗಳು, ನ್ಯಾಮತಿ ಸರ್ಕಾರಿ ಆಸ್ಪತ್ರೆ | | |
| ವಾಸಸ್ಥಳ | : | ನ್ಯಾಮತಿ | | |

ದಿನಾಂಕಃ 07.08.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ-

ನಾನು ದಿಃ 16.03.2022 ರಿಂದ ಇಲ್ಲಿಯವರೆಗೆ ನ್ಯಾಮತಿ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 23.05.2023 ರಂದು ಬೆಳಿಗ್ಗೆ 9.00 ಗಂಟೆಗೆ ಚಾಸಾ-1 ರವರು ಹಲ್ಲೆಯ ಇತಿಹಾಸದಲ್ಲಿ ಚಿಕಿತ್ಸೆ ಪಡೆಯಲು ನ್ಯಾಮತಿ ಸರ್ಕಾರಿ ಆಸ್ಪತ್ರೆಗೆ ಬಂದಿದ್ದು, ನಾನು ಅವರನ್ನು ಪರೀಕ್ಷಿಸಿದಾಗ ಅವರಿಗೆ ಈ ಕೆಳಕಂಡ ಗಾಯಗಳಾಗಿದ್ದವು.

1. ಮೇಲಿನ ತುಟಿಗೆ ಹರಿತ ಗಾಯ.
2. ಎಡಭಾಗದ ಮೂಗಿನ ಮೇಲೆ ಹಾಗೂ ಎಡಹುಬ್ಬಿನ ಮೇಲೆ ತರಚಿದ ಗಾಯ.
3. ಮೇಲ್ಭಾಗ ದವಡೆಯ ಮುಂಭಾಗದ ಹಲ್ಲುಗಳು ಸಡಿಲ ಆಗಿರುತ್ತದೆ.

ಸದರಿ ಗಾಯಗಳು ಸಾಮಾನ್ಯ ಸ್ವರೂಪದ ಗಾಯ ಎಂದು ಅಭಿಪ್ರಾಯಪಟ್ಟಿರುತ್ತೇನೆ. ಈ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಗಾಯದ ಪ್ರಮಾಣ ಪತ್ರವನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಗಾಯದ ಪ್ರಮಾಣ ಪತ್ರವನ್ನು ನಿಪಿ–9 ಎಂದು, ಸಾಕ್ಷಿಯ ಸಹಿಯನ್ನು ನಿಪಿ–9(ಎ) ಎಂದು ಗುರುತಿಸಲಾಯಿತು.

ಮು. ಮಾ 1 ರಿಂದ ಅಥವಾ ಕೈಗಳಿಂದ ಹೊಡೆದರೆ ನಿಪಿ 9 ರಲ್ಲಿ ಕಾಣಿಸಿರುವ ಗಾಯಗಳು ಆಗುವ ಸಾಧ್ಯತೆ ಇರುತ್ತವೆ.

<u>ಪಾಟೀ ಸವಾಲುಃ– ಆರೋಪಿ ಪರ ಶ್ರೀ. ಎಂ ಆರ್ ಎಂ ವಕೀಲರಿಂದಃ–</u>

ನಡೆದುಕೊಂಡು ಹೋಗುವಾಗ ಆಯತಪ್ಪಿ ಗಟ್ಟಿ ನೆಲದ ಮೇಲೆ ಅಥವಾ ಕಲ್ಲಿನ ಮೇಲೆ ಬಿದ್ದಾಗ ನಿಪಿ 9 ರಲ್ಲಿ ಕಾಣಿಸಿರುವ ಗಾಯಗಳು ಆಗುವ ಸಾಧ್ಯತೆ ಇರುತ್ತದೆ ಎಂದರೆ ಸರಿ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.